4666 (5403) ಶ್ರೀ ರಘುಪತಿ ಭಟ್ ಕೆ. (ಉಡುಪಿ) :– ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯ, ನಂದಿಕೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ನಾಗಾರ್ಜುನ ಪವರ್ ಪ್ರಾಜೆಕ್ಟ್‌ಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಅನುಮತಿ ನೀಡಿವೆಯೇ;

ಆ) ಈ ಯೋಜನೆ ಅನುಷ್ಠಾನವಾದರೆ ಪರಿಸರಕ್ಕೆ ಅದರಲ್ಲೂ ವಿಶೇಷವಾಗಿ ಮೀನುಗಾರಿಕೆಗೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸ್ಥಳೀಯ ಪಂಚಾಯತ್ ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಹಾಗೂ ಹೆಚ್ಚಿನ ಜನ ಪ್ರತಿನಿಧಿಗಳು ಈ ಉದ್ದಿಮೆಯನ್ನು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ದಕ್ಷಿಣ ಕನ್ನಡ ಜಿಲ್ಲೆಯ ಧಾರಣ ಶಕ್ತಿ ಅಧ್ಯಯನ ನಂತರ ಯಾವುದೇ ಉದ್ಯಮಕ್ಕೆ ಪರವಾನಿಗೆ ನೀಡುವುದಾಗಿ ಸರ್ಕಾರ ಒಪ್ಪಿಕೊಂಡಿದೆಯೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಹೌದು.

ಆ) ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಇಲಾಖೆಯು ಕೆಲವೊಂದು ನಿಬಂಧನೆಗಳನ್ನು ಪೂರೈಸಬೇಕೆಂಬ ಶರತ್ತಿನೊಂದಿಗೆ ಯೋಜನೆಗೆ ಅನುಮತಿಯನ್ನು ನೀಡಿದೆ.

ಇ) ಕೆಲವೊಂದು ಸ್ಥಳೀಯ ಜನರು ಯೋಜನೆಯನ್ನು ವಿರೋಧಿಸುತ್ತಿದ್ದಾರೆ.

ಈ) ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಇಲಾಖೆ ಮತ್ತು ಕರ್ನಾಟಕ ರಾಜ್ಯದ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರದ ಮೇಲಾಗುವ ಪ್ರಭಾವವನ್ನು ಪರಿಗಣಿಸಿಯೇ ಯೋಜನೆಗೆ ಅನುಮತಿಯನ್ನು ನೀಡಿದೆ.

4667 (5008) ಶ್ರೀ ರಾಜೇಂದ್ರ ವರ್ಮಾ (ಹುಲಸೂರು) :– ಮಾನ್ಯ ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ ಮೂಲಭೂತ ಸೌಲಭ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿರುವ ಒಟ್ಟು ಬೃಹತ್ ಮತ್ತು ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು;

2) ಈ ಕೈಗಾರಿಕೆಗಳಲ್ಲಿ ದುಡಿಯುತ್ತಿರುವ ಒಟ್ಟು ಕಾರ್ಮಿಕರ ಸಂಖ್ಯೆ ಎಷ್ಟು;

3) ಈ ಕಾರ್ಮಿಕರಿಗೆಲ್ಲರಿಗೆ ಸೇವಾ ಭದ್ರತೆ ಒದಗಿಸಲಾಗಿದೆಯೇ?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ ಮೂಲಭೂತ ಸೌಲಭ್ಯ ಸಚಿವರು) :

1) ರಾಜ್ಯದಲ್ಲಿ 3,22,667 ಸಣ್ಣ ಕೈಗಾರಿಕೆಗಳು ಮತ್ತು 1,044 ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಇರುತ್ತವೆ.

2) ಈ ಕೈಗಾರಿಕೆಗಳಲ್ಲಿ ದುಡಿಯುತ್ತಿರುವ ಒಟ್ಟು ಕಾರ್ಮಿಕರ ಸಂಖ್ಯೆ : 21,08,854.

3) ಹೌದು. ಈ ಕೈಗಾರಿಕೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕೆಳಕಂಡ ಕಾನೂನುಗಳನ್ವಯ ಸೇವಾ ಭದ್ರತೆಯನ್ನು ಒದಗಿಸಲಾಗಿದೆ.

1. ಕನಿಷ್ಟ ವೇತನ ಕಾಯ್ದೆ 1948 ಮತ್ತು ಅದರ ನಿಯಮಗಳು 1951
2. ಕಾರ್ಮಿಕ ನಷ್ಟ ಪರಿಹಾರ ಕಾಯ್ದೆ 1923 ಮತ್ತು ಅದರ ನಿಯಮಗಳು 1924
3. ಸಮಾನ ವೇತನ ಪಾವತಿ ಕಾಯ್ದೆ 1976
4. ಕಾರ್ಖಾನೆ ಕಾಯ್ದೆ 1948
5. ಕೈಗಾರಿಕಾ ಸಂಸ್ಥೆಗಳ (ಸ್ಥಾಯಿ ಆದೇಶಗಳು) ಕಾಯ್ದೆ 1946
6. ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965
7. ವೇತನ ಪಾವತಿ ಕಾಯ್ದೆ 1936
8. ಬೋನಸ್ ಕಾಯ್ದೆ 1965
9. ಹೆರಿಗೆ ಸೌಲಭ್ಯ ಕಾಯ್ದೆ 1961

4668 (5009) ಶ್ರೀ ರಾಜೇಂದ್ರ ವರ್ಮಾ (ಹುಲಸೂರು) :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆ ಹುಲಸೂರು ಕ್ಷೇತ್ರದಲ್ಲಿ ಚಾಲ್ತಿಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಾಗೂ ಬಿ.ಸಿ.ಎಂ. ವಸತಿ ನಿಲಯಗಳು ಯಾವುವು;

ಆ) ಇವುಗಳಲ್ಲಿ ವಿದ್ಯಾರ್ಥಿನಿಯರಿಗೆ ಇರುವ ನಿಲಯಗಳು ಯಾವುವು;

ಇ) ಮಿರಖಲ್, ಮೊರಂಬ, ಬೋರ್ದಾ (ಬಿ)ಗಳಲ್ಲಿ ವಸತಿ ನಿಲಯಗಳ ಅವಶ್ಯಕತೆ ಇದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;